2 ನೇ ಆಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ

ಸತ್ರ ಮೊಕದ್ದಮೆ ಸಂಖ್ಯೆಃ 8/2024

ಪಿ.ಡಬ್ಲುಃ 20 ಸಿಡಬ್ಲುಃ 18

| | | |
|---|---|---|
| ಸಾಕ್ಷಿಯ ಹೆಸರು | : | ವಿಜಯಕುಮಾರ |
| ತಂದೆಯ ಹೆಸರು | : | ಸತ್ಯಪ್ಪ |
| ವಯಸ್ಸು | : | 33 ವರ್ಷ |
| ವೃತ್ತಿ | : | ಚಾಲಕ |
| ವಾಸಸ್ಥಳ | : | ಸಂಡೂರು |

ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ 23.06.2026

ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-

1) ನನಗೆ ಚಾಸಾ-17 ರವರ ಪರಿಚಯ ಇಲ್ಲ. ನಾನು ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಮೃತಳ ಸೀರೆ ಜಪ್ತು ಪಂಚನಾಮೆ ಆಗಿದೆ. ಸದರಿ ಪಂಚನಾಮೆಯನ್ನು ನಿಪಿ-9 ಎಂದು ಈಗಾಗಲೆ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ-9(ಸಿ) ಎಂದು ಗುರುತಿಸಲಾಯಿತು. ನಿಪಿ-9 ರಂತೆ ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತು ಗಳನ್ನು ಜಪ್ತು ಮಾಡಿಕೊಂಡಿಲ್ಲ. ನ್ಯಾಯಾಲಯದ ಮುಂದೆ ನೋಡುತ್ತಿರುವ ಎರಡು ಸೀರೆಗಳನ್ನು, ರವಿಕೆ ಮತ್ತು ಲಂಗವನ್ನು ನಾನು ಈ ಮೊದಲು ನೋಡಿಲ್ಲ. ಈಗ ಸುಮಾರು 1 ವರ್ಷದ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ನನ್ನ ಸಹಿಯನ್ನು ನಿಪಿ-9 ರಲ್ಲಿ ತೆಗೆದುಕೊಂಡಿದ್ದರು. ನಿಪಿ-9 ರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀಸವಾಲು ಮಾಡಲು ಸ ಅ ರವರು ಪರವಾನಿಗೆ ಕೇಳುತ್ತಾರೆ. ಸ ಅ ರವರ ವಾದವನ್ನು ಕೇಳಿ ಸಾಕ್ಷಿಯ ಹೇಳಿಕೆಯನ್ನು ಹಾಗೂ ಮುಖ್ಯ ವಿಚಾರಣೆಯನ್ನು ಪರಿಶೀಲನೆ ಮಾಡಿ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪರವಾನಿಗೆ ಕೊಡಲಾಯಿತು).

SC No.8/2024
PW- 20

<u>ಪಾಟೀಸವಾಲು ಮಾನ್ಯ ಸಾರ್ವಜನಿಕ ಅಭಿಯೋಜಕರಿಂದ:</u>

ದಿಃ **29-09-2023** ರಂದು ನನ್ನನ್ನು ಮತ್ತು ಚಾಸಾ-**17** ರವರನ್ನು ಪೊಲೀಸರು ಠಾಣೆಗೆ ಪಂಚರೆಂದು ಕರೆದಿದ್ದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-**22** ರವರು ನಮ್ಮ ಮುಂದೆ ಈಗ ನಾನು ನ್ಯಾಯಾಲಯದ ಮುಂದೆ ನೋಡುತ್ತಿರುವ ಮುಮಾ-**1** ರಿಂದ **4** ---ಮೃತಳ ಸೀರೆ, ಒಳಲಂಗ ಮತ್ತು ರವಿಕೆಯನ್ನು ಹಾಗೂ ಇನ್ನೊಂದು ಸೀರೆಯನ್ನು ಹಾಜರುಪಡಿಸಿದ್ದ ಎಂದರೆ ಸರಿಯಲ್ಲ. ಪೊಲೀಸರು ಸದರಿ ವಸ್ತುಗಳನ್ನು ನಮ್ಮ ಸಮಕ್ಷಮ ನನಗೆ ಈಗ ಓದಿ ಹೇಳಿದಂತೆ ನಿಪಿ-**9** ರಂತೆ ಮುಂಜಾನೆ **10-00** ಗಂಟೆಯಿಂದ **11-00** ಗಂಟೆವರೆಗೆ ಮಹಜರ್ ನ್ನು ಮಾಡಿ ಜಪ್ತು ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಸದರಿ ಮಹಜರ್ ಸಂಗತಿ ತಿಳಿದುಕೊಂಡು ನಾನು ಸಹಿ ಮಾಡಿದ್ದೆ ಎಂದರೆ ಸರಿಯಲ್ಲ. ಎಲ್ಲಾ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿ ಪರ ಶ್ರೀ ಜಿ.ಬಿ.ಆರ್ ವಕೀಲರಿಂದ</u>

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರು ವಿಚಾರಣೆಃ

ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.